# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಪತ್ರ ಸಂಖ್ಯೆ: ಜಿಪಂಚಿ/ಯೋ2/ಗ್ರಾಪಂ.ದೂರು/2016-17 ದಿ:23-02-2017.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 04-04-2017 ರ ಕಾರಣ ಕೇಳುವ ನೋಟೀಸ್.
3. ಶ್ರೀ ಗಂಗಾಧರ ನಾಯ್ಕ ಸದಸ್ಯರು ಇವರು ಸರ್ಕಾರದ ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 21.07.2017.
4. ಶ್ರೀಮತಿ ಪೂರ್ಣಿಮ ಬಾಯಿ ಸದಸ್ಯರು, ಇವರು ಸರ್ಕಾರದ ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:27-04-2017.
5. ವಿಚಾರಣೆಗೆ ಹಾಜರಾಗುವ ತಿಳುವಳಿಕೆ ಪತ್ರ ಸಂಖ್ಯೆ:ಗ್ರಾಅಪ:264:ಗ್ರಾಪಂಅ:2017, ದಿನಾಂಕ: 16-05-2017 ಮತ್ತು 29.05.2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ: 23-02-2017 ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಪತ್ರದಲ್ಲಿ ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರು ತಂಗಲಿ ಗ್ರಾಮ ಪಂಚಾಯತಿ ವ್ಯಾಪ್ತಿಯ, ವೆಂಕಟಲಕ್ಷ್ಮಮ್ಮ ನಗರ (ವಿ.ಎಲ್.ನಗರ) ಗ್ರಾಮದಲ್ಲಿ ಅಸೆಸ್‌ಮೆಂಟ್ ಸಂಖ್ಯೆ 60,61,62,63,64 ರಲ್ಲಿ ಕ್ರಮವಾಗಿ ಸುಸ್ಥಿತಿಯಲ್ಲಿದ್ದ ನಾಲ್ಕು ಸರ್ಕಾರಿ ಸ್ವಾಮ್ಯದ ಕಟ್ಟಡಗಳಾದ ರಂಗಮಂದಿರ, ಅಮುದಾಯ ಭವನ, ಅಂಗನವಾಡಿ ಕೇಂದ್ರ, ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡಗಳನ್ನು ಕಾನೂನು ಬಾಹಿರವಾಗಿ ನೆಲಸಮಗೊಳಿಸಿದ್ದು ಇವರ ವಿರುದ್ಧ ಕರ್ನಾಟಕ ಪಂ.ರಾಜ್ ಅಧಿನಿಯಮದ ಕಲಂ 43-ಎ ರಡಿ ಕ್ರಮ ಕೈಗೊಳ್ಳುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರಿಗೆ ದಿನಾಂಕ: 04-04-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ಮತ್ತು (4)ರಲ್ಲಿ ಕೆಳಕಂಡಂತೆ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಅಸೆಸ್‌ಮೆಂಟ್ ಸಂಖ್ಯೆ 60,61,62,63,64 ರಲ್ಲಿ ಸುಸ್ಥಿತಿಯಲ್ಲಿದ್ದ ನಾಲ್ಕು ಸರ್ಕಾರಿ ಸ್ವಾಮ್ಯದ ಕಟ್ಟಡಗಳನ್ನು ಕಾನೂನು ಬಾಹಿರವಾಗಿ ನೆಲಸಮಗೊಳಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.
ಅಸೆಸ್‌ಮೆಂಟ್ ಸಂಖ್ಯೆ 113 ರಲ್ಲಿ ಸಾರ್ವಜನಿಕ ಭವನಕ್ಕೆ ಸ್ಥಳ ಕಾಯ್ದಿರಿಸಿದ್ದು, ಸದರಿ ಸ್ಥಳಕ್ಕೆ, ಪಿ.ಡಿ.ಓ ಗ್ರಾ.ಪಂ, ತಂಗಲಿ ರವರು ದಿ: 13-06-2016 ರಂದು ದೃಢೀಕರಣ ಪತ್ರ ನೀಡಿರುತಾರೆ. ಸದರಿ ಕಟ್ಟಡ ಕಾಮಗಾರಿ ನಡೆಯುತ್ತಿರುವುದಾಗಿ ತಿಳಿಸಿರುತ್ತಾರೆ.
ಅಸೆಸ್‌ಮೆಂಟ್ ಸಂಖ್ಯೆ 64 ರಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣಕ್ಕೆ ಕಾಯ್ದಿರಿಸಲಾಗಿದ್ದು, ಕಟ್ಟಡ ಕಾಮಗಾರಿ ಪ್ರಗತಿಯಲ್ಲಿರುವುದಾಗಿ ತಿಳಿಸಿರುತ್ತಾರೆ.
ಅಸೆಸ್‌ಮೆಂಟ್ ಸಂಖ್ಯೆ 114ರಲ್ಲಿ ಶುದ್ಧಗಂಗಾ ಘಟಕವನ್ನು ದಿ:07-03-2017 ರಂದು ಪೂರ್ಣಗೊಂಡಿರುವುದಾಗಿ ತಿಳಿಸಿರುತ್ತಾರೆ.
ಅಸೆಸ್‌ಮೆಂಟ್ ಸಂಖ್ಯೆ 114:1ರಲ್ಲಿ ಅಂಗನವಾಡಿ ಕೇಂದ್ರವಿದ್ದು, ದಿ:07-03-2017 ರಂದು ಪೂರ್ಣಗೊಂಡಿರುವುದಾಗಿ ತಿಳಿಸಿರುತ್ತಾರೆ.

ಈ ಮೇಲಿನ ಹೇಳಿಕೆಗಳಿಗೆ ಸಂಬಂಧಿಸಿದಂತೆ ಪಿ.ಡಿ.ಓ ರವರು ನೀಡಿದ ದಾಖಲೆಗಳ ನಕಲನ್ನು ಹಾಜರುಪಡಿಸಿರುವುದಾಗಿ ತಿಳಿಸಿರುತ್ತಾರೆ.
ನನಗೆ ನಿಮ್ಮ ನೋಟಿಸ್ ನಲ್ಲಿ ತಿಳಿಸಿರುವ ಅಸೆಸ್‌ಮೆಂಟ್ ಸಂಖ್ಯೆಗಳಲ್ಲಿರುವ ಕಟ್ಟಡಗಳ ಬಗ್ಗೆ ಮಾಹಿತಿ ಇಲ್ಲ ಎಂದು ತಿಳಿಸಿರುತ್ತಾರೆ.
ನಮ್ಮ ವಿರುದ್ಧ ಪಿ.ಡಿ.ಓ ಗ್ರಾ.ಪಂ, ತಂಗಲಿ ರವರು ಕಡೂರು ಪೊಲೀಸ್‌ರಿಗೆ ಸುಳ್ಳು ದೂರು ನೀಡಿದ್ದುಪ್ರಕರಣ ಸಂಖ್ಯೆ 341/2016 ರಲ್ಲಿ ಕೇಸು ದಾಖಲಿಸಿದ್ದು ನಾವು ಜಾಮೀನು ಪಡೆದುಕೊಂಡಿರುವುದಾಗಿ ತಿಳಿಸಿರುತ್ತಾರೆ.
ಆದ್ದರಿಂದ ನಮಗೆ ನೀಡಿರುವ ನೋಟಿಸ್‌ಗಳನ್ನು ವಾಪಸ್ಸು ಪಡೆಯಬೇಕಾಗಿ ಪ್ರಾರ್ಥಿಸಿರುತ್ತಾರೆ.

ಮೇಲೆ ಓದಲಾದ (5) ರನ್ವಯ ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆ ಕರೆಯಲಾಗಿ ದಿನಾಂಕ:06-06-2017 ರಂದು ಜರುಗಿದ ವಿಚಾರಣೆಯಲ್ಲಿ ಶ್ರೀ ಬಿ.ಓ.ವರುಣ ರೆಡ್ಡಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕ, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು, ಅರುಂದತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಂಗಲಿ ಗ್ರಾಮ ಪಂಚಾಯತಿ, ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರು ಹಾಜರಾಗಿರುತ್ತಾರೆ. ಸದಸ್ಯರು ತಮ್ಮ ಮೌಖಿಕ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರುಗಳು ಸರ್ಕಾರಿ ಆಸ್ತಿಯನ್ನು ನಾಶಪಡಿಸಿರುವ ಹಿನ್ನಲೆಯಲ್ಲಿ ಹಾಗೂ ಅನಧಿಕೃತವಾಗಿ ಸರ್ಕಾರಿ ಜಾಗದಲ್ಲಿ ಮನೆ ಕಟ್ಟಿಕೊಳ್ಳಲು ಅನುವು ಮಾಡಿಕೊಟ್ಟು ದುರ್ನಡತೆ ಎಸಗಿರುವುದು ಸಾಬೀತಾಗಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ತಂಗಲಿ ಗ್ರಾಮ ಪಂಚಾಯಿತಿ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/264/ಗ್ರಾಪಂಅ/2017**
**ಬೆಂಗಳೂರು, ದಿನಾಂಕ: 09-04-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಗಂಗಾಧರ ನಾಯ್ಕ, ಸದಸ್ಯರು ಮತ್ತು ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರುಗಳು ಸರ್ಕಾರಿ ಆಸ್ತಿಯನ್ನು ನಾಶಪಡಿಸಿರುವ ಹಿನ್ನಲೆಯಲ್ಲಿ ಹಾಗೂ ಅನಧಿಕೃತವಾಗಿ ಸರ್ಕಾರಿ ಜಾಗದಲ್ಲಿ ಮನೆ ಕಟ್ಟಿಕೊಳ್ಳಲು ಅನುವು ಮಾಡಿಕೊಟ್ಟು ದುರ್ನಡತೆ ಎಸಗಿರುವುದು ಸಾಬೀತಾಗಿರುವುದರಿಂದ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಚಿಕ್ಕಮಗಳೂರು ಜಿಲ್ಲೆ, ಕಡೂರು ತಾಲ್ಲೂಕು, ತಂಗಲಿ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

10/4/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಗಳು:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ,

2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
3) ಶ್ರೀ ಗಂಗಾಧರ ನಾಯ್ಕ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
4) ಶ್ರೀಮತಿ ಪೂರ್ಣಿಮ ಬಾಯಿ, ಸದಸ್ಯರು, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಂಗಲಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.